# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 30–11–2016ರಂದು ಮಧ್ಯಾಹ್ನ 3.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಮುಖ್ಯ ಲೆಕ್ಕಾಧಿಕಾರಿಗಳು |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | ಕೌನ್ಸಿಲ್ ಕಾರ್ಯದರ್ಶಿಗಳು |
| 3. | ಎನ್.ಉಮಾ | – ಸದಸ್ಯರು | ಉಪ ನಿಯಂತ್ರಕರು (ಹಣಕಾಸು) |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | ಜಂಟಿ ಆಯುಕ್ತರು (ಆರ್.ಆರ್.ನಗರ) |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | ಮು.ಅ.(ಆರ್.ಆರ್.ನಗರ) |
| 6. | ವಿ.ಸುರೇಶ್ | – ಸದಸ್ಯರು | ಸ.ನಿ.(ಹಣಕಾಸು) |
| 7. | ಹೆಚ್.ಕುಸುಮಾ | – ಸದಸ್ಯರು | ಸ.ನಿ & ಎ.ಸಿ(ಆಡಿಟ್ ಸೆಲ್) |
| 8. | ಎಂ.ಮಾಲತಿ | – ಸದಸ್ಯರು | ಎ.ಓ. (ಆಡಿಟ್ ಸೆಲ್) |
| 9. | ಎಂ.ಶಾಮಲ | – ಸದಸ್ಯರು | ಸಂಬಂಧಪಟ್ಟ ಎಲ್ಲಾ ಸ.ಕಂ.ಅ |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | ಆರೋಗ್ಯಾಧಿಕಾರಿಗಳು (ಆರ್.ಆರ್.ನಗರ) |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | ತೋ.ಅ (ಆರ್.ಆರ್.ನಗರ) |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಸಮಿತಿಯ ಸದಸ್ಯರುಗಳಿಗೆ ಮತ್ತು ಅಧಿಕಾರಿಗಳಿಗೆ ಸ್ವಾಗತ ಕೋರಿ, ತಮ್ಮ ಪರಿಚಯವನ್ನು ಮಾಡಿಕೊಂಡು ನಂತರ ಸಮಿತಿಯ ಸದಸ್ಯರುಗಳು ಮತ್ತು ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಳ್ಳುವಂತೆ ಕೋರಿದರು. ಅದರಂತೆ, ಹಾಜರಿದ್ದ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ, ಬೆಂಗಳೂರು ಮಹಾನಗರ ಪಾಲಿಕೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ ವಿಸ್ತಾರಗೊಂಡ ನಂತರದ ಅಂದರೆ 2006–07ನೇ ಸಾಲಿನಿಂದ ತಹಲ್‌ವರೆಗಿನ ಲೆಕ್ಕಪರಿಶೋಧನಾ ವರದಿಯನ್ನು ಪರಿಶೀಲಿಸಲು ಸಮಿತಿಯು ತೀರ್ಮಾನಿಸಿದ್ದು, ಅದರಂತೆ ಆರ್.ಆರ್.ನಗರ ವಲಯಕ್ಕೆ ಸಂಬಂಧಿಸಿದಂತೆ 2006–07ನೇ ಸಾಲಿನಿಂದ ಇದುವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು

ವಸೂಲಾತಿ ಮೊತ್ತದ ಬಗ್ಗೆ ಹಾಗೂ ಸದರಿ ಸಾಲುಗಳಿಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ವಿವರವಾದ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ನಂತರ ಉಪ ನಿಯಂತ್ರಕರು (ಹಣಕಾಸು-ಕೇಂದ್ರ) ರವರು ಮಾತನಾಡುತ್ತಾ, ಪಾಲಿಕೆಯ ವ್ಯಾಪ್ತಿಯ ವಿವಿಧ ಕಛೇರಿಗಳಲ್ಲಿನ ವಾರ್ಷಿಕ ವರದಿಯಲ್ಲಿ ಬಾಕಿ ಇರುವ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಸಂಬಂಧಿಸಿದಂತೆ 1995-96ನೇ ಸಾಲಿನಿಂದ 2013-14ನೇ ಸಾಲಿನವರೆಗೆ ಒಟ್ಟು 15662 ಕಂಡಿಕೆಗಳು ಬಾಕಿ ಇದ್ದು 2008-09ನೇ ಸಾಲಿನವರೆಗೆ ಲೆಕ್ಕ ಪರಿಶೋಧನೆಯ ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಉತ್ತಮ ಪ್ರತಿಕ್ರಿಯೆ ಇದ್ದು, ತದನಂತರ ಹೆಚ್ಚಿನ ಬೆಳವಣಿಗೆಗಳು ಇಲ್ಲದೆ ಇರುವುದು ಕಂಡುಬಂದಿದ್ದು, ಇದಕ್ಕೆ ಕಾರ್ಯಯೋಜನೆ ಇಲ್ಲದೆ ಇರುವುದೇ ಮುಖ್ಯ ಕಾರಣ ಎಂದು ತಿಳಿಸುತ್ತಾ, ಸಮಿತಿಯು 2006-07ನೇ ಸಾಲಿನಿಂದ ತಹಲ್‌ವರೆಗಿನ ಲೆಕ್ಕಪರಿಶೋಧನಾ ವರದಿಯನ್ನು ಪರಿಶೀಲಿಸಲು ತೀರ್ಮಾನಿಸಿದ್ದು, ಆರ್.ಆರ್.ನಗರ ವಲಯಕ್ಕೆ ಸಂಬಂಧಿಸಿದಂತೆ ಇರುವ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ ಮೊತ್ತ ಮತ್ತು ತೀರುವಳಿಗಳ ಬಗ್ಗೆ ಸಭೆಗೆ ಮಾಹಿತಿ ನೀಡುತ್ತಾ, ಪಾಲಿಕೆಯ ಆರ್ಥಿಕ ಹಿತದೃಷ್ಟಿಯಿಂದ ಬಾಕಿ ಇರುವ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ಸಿಬ್ಬಂದಿಗಳಿಗೆ ತಿಳಿಸಿದರು.

ನಂತರ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಜಂಟಿ ಆಯುಕ್ತರು ರವರಿಗೆ ಕೆ.ಎಂ.ಸಿ ಕಾಯ್ದೆ 440. 150ನೇ ಪ್ರಕರಣ ಮತ್ತು IX ನೇ ಅನುಸೂಚಿಯ ಪ್ರಕಾರ ಎಷ್ಟು ಪ್ರಕರಣಗಳಿಗೆ ಜುಲ್ಮಾನೆಯನ್ನು ವಿಧಿಸಲಾಗಿರುತ್ತದೆ ಎಂಬುದರ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಆರ್.ಆರ್.ನಗರ ವಲಯ ವ್ಯಾಪ್ತಿಯಲ್ಲಿ ಸದರಿ ನಿಯಮದ ಅಡಿಯಲ್ಲಿ ಯಾವುದೇ ದಂಡವನ್ನು ವಿಧಿಸಿರುವುದಿಲ್ಲವೆಂದು, ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ ಅಗತ್ಯ ಕ್ರಮವನ್ನು ವಹಿಸಲಾಗುವುದೆಂದು ಹಾಜರಿದ್ದ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಮುಂದುವರಿದು ಆರ್.ಆರ್.ನಗರ ವಲಯಕ್ಕೆ ಸಂಬಂಧಿಸಿದಂತೆ ಬಾಕಿ ಇರುವ ಕಂಡಿಕೆಗಳಿಗೆ, ಆಕ್ಷೇಪಣೆಗಳಿಗೆ ಹಾಗೂ ವಸೂಲಾತಿಗೆ ಸಂಬಂಧಪಟ್ಟಂತೆ ಕೈಗೊಂಡಿರುವ ಕ್ರಮಗಳು ಹಾಗೂ ಈ ಬಗ್ಗೆ ವಲಯ ಮಟ್ಟದಲ್ಲಿ ಸಭೆಯನ್ನು ನಡೆಸಿರುವ ಮಾಹಿತಿಯನ್ನು ಸಲ್ಲಿಸಲು ಹಾಜರಿದ್ದ ಜಂಟಿ ಆಯುಕ್ತರವರಿಗೆ ಸೂಚಿಸಿದಾಗ, ಲೆಕ್ಕಪರಿಶೋಧನೆಯ ಕುರಿತು ಈಗಾಗಲೇ ಸಭೆಗಳನ್ನು ನಡೆಸಿದ್ದು, ಲೆಕ್ಕ

ಪರಿಶೋಧನಾ ವರದಿಗಳ ಆಕ್ಷೇಪಣೆ ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ಅನುಸರಣಾ ವರದಿಯನ್ನು ಸಲ್ಲಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ತಿಳಿಸಿದರು. ಆಗ ವಲಯ ಮಟ್ಟದಲ್ಲಿ ಸಭೆಗಳನ್ನು ನಡೆಸಿರುವ ಬಗ್ಗೆ ತಯಾರಿಸಿರುವ ನಡವಳಿಗಳನ್ನು ಸಲ್ಲಿಸಲು ಸೂಚಿಸಿದಾಗ, ಜಂಟಿ ಅಯುಕ್ತರವರು ಈ ಬಗ್ಗೆ ಸಮರ್ಪಕ ಮಾಹಿತಿಯನ್ನು ನೀಡದೆ ಗೊಂದಲದಲ್ಲಿದ್ದಂತೆ ಕಂಡುಬಂದಾಗ, ಸಮಿತಿಯ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ಜಂಟಿ ಆಯುಕ್ತರವರಿಗೆ ತಾವು ವಲಯ ಮಟ್ಟದಲ್ಲಿ ಈ ಕುರಿತು ಯಾವುದೇ ಸಭೆಯನ್ನು ನಡೆಸದೇ ಇರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆಂದು, ವಲಯ ಮಟ್ಟದಲ್ಲಿ ಯಾವುದೇ ಸಭೆಯನ್ನು ನಡೆಸಿದರೂ, ಅದಕ್ಕೆ ನಡವಳಿಗಳನ್ನು ತಯಾರಿಸುವುದು ಅವಶ್ಯಕವಾಗಿರುತ್ತದೆಂದು, ಈ ನಿಟ್ಟಿನಲ್ಲಿ ಇನ್ನು ಮುಂದೆ ಸೂಕ್ತ ಕ್ರಮವನ್ನು ವಹಿಸತಕ್ಕದೆಂದು ಸೂಚಿಸಿದರು.

ನಂತರ ಅಧ್ಯಕ್ಷರು ಸಹ ಇನ್ನು ಮುಂದೆ ವಲಯ ಮಟ್ಟದಲ್ಲಿ ಪ್ರತಿ ತಿಂಗಳಿಗೊಮ್ಮೆ ಲೆಕ್ಕಪತ್ರ ನಿರ್ವಹಣೆ ಕುರಿತಂತೆ ಅಧೀನ ಕಛೇರಿಗಳ ಅಧಿಕಾರಿಗಳೊಂದಿಗೆ ಸಭೆಯನ್ನು ನಿಗಧಿಪಡಿಸಿ, ಚರ್ಚಿಸಿ ನಡವಳಿಗಳನ್ನು ತಯಾರಿಸಿ ಸಮಿತಿಗೆ ವರದಿಯನ್ನು ಸಲ್ಲಿಸಲು ಹಾಗೂ ಮುಂದಿನ ದಿನಗಳಲ್ಲಿ ಸಮಿತಿಯು ನಡೆಸುವ ಸಭೆಗೆ ಎಲ್ಲಾ ವಿವರಗಳೊಂದಿಗೆ ಹಾಜರಾಗಬೇಕೆಂದು ಸೂಚಿಸಿದರು.

ಮುಂದುವರಿದು ಸಭೆಯಲ್ಲಿ ಹಾಜರಿದ್ದ ತೋಟಗಾರಿಕಾ ಅಧೀಕ್ಷಕರು (ಆರ್.ಆರ್.ನಗರ) ರವರ ಕಛೇರಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ತೋಟಗಾರಿಕಾ ಅಧೀಕ್ಷಕರು ಸಭೆಗೆ ಕೆಲವೊಂದು ತಪ್ಪು ಮಾಹಿತಿಯನ್ನು ನೀಡಿರುವುದು ಮೇಲ್ನೋಟಕ್ಕೆ ಕಂಡುಬಂದ ಹಿನ್ನೆಲೆಯಲಿ, ಸದಸ್ಯರಾದ ಶ್ರೀಯುತ ಎಂ.ಗೌತಮ್ ಕುಮಾರ್ ರವರು ಆರ್.ಆರ್.ನಗರ ವಲಯ ವ್ಯಾಪ್ತಿಯಲ್ಲಿ ತೋಟಗಾರಿಕಾ ಅಧೀಕ್ಷಕರವರ ಕಛೇರಿಯಿಂದ ನಿರ್ವಹಣೆ ಮಾಡುತ್ತಿರುವ ಉದ್ಯಾನವನಗಳ ವಿವರ, ಅವುಗಳ ನಿರ್ವಹಣೆ ಹಾಗೂ ಟೆಂಡರ್ ಕರೆದಿರುವ ಬಗ್ಗೆ ಸಂಬಂಧಪಟ್ಟ ಸಂಪೂರ್ಣ ಕಡತಗಳನ್ನು ಸಮಿತಿಗೆ ಪರಿಶೀಲನೆಗೆ ತರಲು ಸೂಚಿಸಿದರು.

ನಂತರ ವಲಯದ ಆರೋಗ್ಯ ಇಲಾಖೆಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಆರೋಗ್ಯಾಧಿಕಾರಿಗಳು ಆರೋಗ್ಯ ಇಲಾಖೆಗೆ ಸಂಬಂಧಿಸಿದಂತೆ ಲೆಕ್ಕ ಪರಿಶೋಧಾನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು

ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿಯನ್ನು ಸಲ್ಲಿಸಿರುವುದಾಗಿ ತಿಳಿಸಿದರು. ಆಗ ಹಾಜರಿದ್ದ ಉಪ ನಿಯಂತ್ರಕರು (ಹಣಕಾಸು-ಕೇಂದ್ರ) ರವರು ದಾಖಲೆಗಳನ್ನು ಪರಿಶೀಲಿಸಿ ಮಾಹಿತಿಗಳು ಸಮರ್ಪಕವಾಗಿರುವುದಾಗಿ ತಿಳಿಸಿದರು. ಆಗ ಅಧ್ಯಕ್ಷರು, ಇನ್ನು ಮುಂದೆಯು ಇದೇ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸಬೇಕೆಂದು ಸೂಚಿಸಿದರು.

ನಂತರ ಹಾಜರಿದ್ದ ಮುಖ್ಯ ಅಭಿಯಂತರರು (ಆರ್.ಆರ್.ನಗರ) ರವರಿಗೆ ಕಾಮಗಾರಿ ವಿಭಾಗಕ್ಕೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ವಿವರವಾದ ಮಾಹಿತಿಯನ್ನು ಸಭೆಗೆ ನೀಡಲು ಸೂಚಿಸಿದಾಗ, ಸದರಿಯವರು ಕಾಮಗಾರಿ ವಿಭಾಗಕ್ಕೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಹಾಗೂ ಸಹಾಯಕ ನಿಯಂತ್ರಕರು (ಹಣಕಾಸು) ರವರೊಂದಿಗೆ ಈಗಾಗಲೇ ಚರ್ಚಿಸಿ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿರುವುದಾಗಿ ತಿಳಿಸಿದರು. ಅಧ್ಯಕ್ಷರು ಈ ಬಗ್ಗೆ ನಡೆಸಿರುವ ಸಭೆಯ ನಡವಳಿಗಳನ್ನು ಸಲ್ಲಿಸಲು ಸೂಚಿಸಿದಾಗ, ಮುಖ್ಯ ಅಭಿಯಂತರರು ಸಭೆಯನ್ನು ನಡೆಸಿರುವ ಕುರಿತು ಯಾವುದೇ ನಡವಳಿಗಳನ್ನು ತಯಾರಿಸಿರುವುದಿಲ್ಲವೆಂದು, ಮುಂದಿನ ವಾರದಲ್ಲಿ ವಲಯ ವ್ಯಾಪ್ತಿಯಲ್ಲಿ ಸಭೆಯನ್ನು ನಡೆಸಿ ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಸಭೆಯ ನಡವಳಿಗಳೊಂದಿಗೆ ಸಲ್ಲಿಸುವುದಾಗಿ ಹಾಗೂ ಇನ್ನು ಮುಂದೆ ಪ್ರತಿ ತಿಂಗಳಿಗೊಮ್ಮೆ ಲೆಕ್ಕ ಪರಿಶೋಧನಾ ವರದಿಗಳಿಗೆ ಸಂಬಂಧಿಸಿದಂತೆ ಸಭೆಯನ್ನು ನಡೆಸುವುದಾಗಿ ಮತ್ತು ಲೆಕ್ಕ ಪರಿಶೋಧನಾ ವರದಿಗಳಿಗೆ ಸೂಕ್ತ ಕ್ರಮ ಕೈಗೊಳ್ಳದ ಅಧಿಕಾರಿ/ಸಿಬ್ಬಂದಿಗಳಿಗೆ ನೋಟೀಸ್ ಜಾರಿ ಮಾಡುವುದಾಗಿ ಇಲ್ಲವಾದಲ್ಲಿ ವೇತನವನ್ನು ತಡೆಹಿಡಿಯುವುದಾಗಿ ತಿಳಿಸಿದರು.

ಮುಂದುವರಿದು ಸಮಿತಿಯ ಸದಸ್ಯರಾದ ಶ್ರೀಯುತ ಗೌತಮ್ ರವರು ಮಾತನಾಡುತ್ತಾ, ಸಮಿತಿಯು ಪಾಲಿಕೆಯ ವ್ಯಾಪ್ತಿಯಲ್ಲಿ ಲೆಕ್ಕ ಪರಿಶೋಧನಾ ವರದಿಯಲ್ಲಿನ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಬಾಕಿ ಇರುವ ಅಂಕಿಅಂಶಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸದೇ ಇರುವುದನ್ನು ಗಂಭೀರವಾಗಿ ಪರಿಗಣಿಸಿದ್ದು, ಇದು ಪಾಲಿಕೆಯ ಆರ್ಥಿಕ ಬೆಳವಣಿಗೆಯ ಮೇಲೂ ಪರಿಣಾಮ ಬೀರುತ್ತಿದ್ದು, ಈ ನಿಟ್ಟಿನಲ್ಲಿ ಪ್ರಸಕ್ತ ಅವಧಿಯಲ್ಲಿ ಸಮಿತಿಯು ಲೆಕ್ಕಪತ್ರ ನಿರ್ವಹಣೆಯಲ್ಲಿ ಕೆಲವೊಂದು ಬದಲಾವಣೆಯನ್ನು ತರುವ ಉದ್ದೇಶ ಹೊಂದಿದ್ದು, ಅದಕ್ಕೆ ಪೂರಕವಾಗಿ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ಕಛೇರಿಯ ಅಧಿಕಾರಿಗಳು ಕರ್ತವ್ಯವನ್ನು ನಿರ್ವಹಿಬೇಕೆಂದು ಸೂಚಿಸಿದರು. ಅಲ್ಲದೆ ಸಮಿತಿಯು ಮುಂಬರುವ ದಿನಗಳಲ್ಲಿ ಅನಿರೀಕ್ಷಿತವಾಗಿ ಕಛೇರಿಗಳಿಗೆ ತಪಾಸಣೆಗೆ ಬರುವುದಾಗಿ ತಿಳಿಸುತ್ತಾ, ತಪಾಸಣಾ ಸಮಯದಲ್ಲಿ ಲೆಕ್ಕಪತ್ರ ನಿರ್ವಹಣೆಯಲ್ಲಿ

ಯಾವುದೇ ಲೋಪದೋಷಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಮುಂದುವರಿದಂತೆ, ಸಭೆಯಲ್ಲಿ ಹಾಜರಿದ್ದ ಆರ್.ಆರ್.ನಗರ ವಲಯದ ಎಲ್ಲಾ ಸಹಾಯಕ ಕಂದಾಯ ಅಧಿಕಾರಿಗಳು ಅವರವರ ಕಛೇರಿಗಳಿಗೆ ಸಂಬಂಧಿಸಿದಂತೆ, ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತದ ವಿವರಗಳನ್ನು ಸಭೆಗೆ ನೀಡಲು ಸೂಚಿಸಲಾಗಿ, ಸದರಿಯವರುಗಳು ಸಮಿತಿಯ ಕೇಳಿದ ಮಾಹಿತಿಗಳನ್ನು ಸಮರ್ಪಕವಾಗಿ ನೀಡುವಲ್ಲಿ ವಿಫಲರಾಗಿರುತ್ತಾರೆ. ಮುಂದಿನ ದಿನಗಳಲ್ಲಿ ಸಮಿತಿಯು ಕೋರಿರುವ ಎಲ್ಲಾ ವಿವರಗಳನ್ನು ಸಲ್ಲಿಸುವುದಾಗಿ ತಿಳಿಸುತ್ತಾ, ಈಗಾಗಲೇ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಲು ಅಗತ್ಯ ಕ್ರಮಗಳನ್ನು ಕೈಗೊಂಡಿರುವುದಾಗಿ ತಿಳಿಸಿದಾಗ, ಅಧ್ಯಕ್ಷರು ಮುಂದಿನ ಸಭೆಗೆ ಎಲ್ಲಾ ವಿವರಗಳೊಂದಿಗೆ ಹಾಜರಾಗಲು ಹಾಗೂ ಪಾಲಿಕೆಯ ಮೂಲ ಆದಾಯವಾಗಿರುವ ತೆರಿಗೆಯನ್ನು ಸಮರ್ಪಕವಾಗಿ ವಸೂಲು ಮಾಡಬೇಕೆಂದು ಅಲ್ಲದೆ ನಿವೇಶನಗಳಿಗೆ ಕಂದಾಯವನ್ನು ನಿಗಧಿಪಡಿಸುವಾಗ ಅಳತೆಗಳಲ್ಲಿ ವ್ಯತ್ಯಾಸಗಳನ್ನು ಮಾಡುತ್ತಿರುವುದಾಗಿ ದೂರಗಳು ಬರುತ್ತಿದ್ದು, ಈ ಬಗ್ಗೆ ಮರು ಪರಿಶೀಲನೆ ಮಾಡಿ ಕಂದಾಯವನ್ನು ನಿಗಧಿಪಡಿಸಬೇಕೆಂದು ಸಹ ಸೂಚಿಸಿದರು.

ನಂತರ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ಮಾತನಾಡುತ್ತಾ ಹಲವಾರು ಪ್ರಕರಣಗಳಲ್ಲಿ ಅಭಿವೃದ್ಧಿ ಶುಲ್ಕವನ್ನು ವಸೂಲು ಮಾಡದೇ ಖಾತಾ ನೊಂದಾವಣೆ ಮಾಡಿರುವುದಾಗಿ ದೂರುಗಳು ಬರುತ್ತಿದ್ದು, ಈ ನಿಟ್ಟಿನಲ್ಲೂ ಲೆಕ್ಕ ಪರಿಶೋಧನೆ ಆಕ್ಷೇಪಣೆಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ಸಾಧ್ಯವಾಗುತ್ತಿರುವುದಿಲ್ಲವೆಂದು ಮಾಹಿತಿ ಇದ್ದು, ಈ ಬಗ್ಗೆ ವಾಸ್ತವಾಂಶದ ಮಾಹಿತಿಯನ್ನು ಸಭೆಗೆ ನೀಡಲು ತಿಳಿಸಿದಾಗ, ಹಾಜರಿದ್ದ ಕಂದಾಯ ವಿಭಾಗದ ಅಧಿಕಾರಿಗಳು ಈ ಬಗ್ಗೆ ನ್ಯಾಯಾಲಯದಲ್ಲಿ ಇದ್ದ ದಾವೆಯು ಇತ್ಯರ್ಥಗೊಂಡಿದ್ದು, ಅದರಂತೆ ಮುಂದಿನ ಅಗತ್ಯ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಎಸ್.ಎ.ಎಸ್ ಬಗ್ಗೆ ಮಾತನಾಡುತ್ತಾ ಎಸ್.ಎ.ಎಸ್ ಅಡಿಯಲ್ಲಿ ತೆರಿಗೆಯನ್ನು ಪಾವತಿಸುತ್ತಿದ್ದು, ಇದರ ಅಡಿಯಲ್ಲಿ ಎಷ್ಟು ಆಸ್ತಿಗಳನ್ನು ನೋಂದಣಿ ಮಾಡಲಾಗಿದೆ ಅವುಗಳ ಸಂಪೂರ್ಣ ವಿವರಗಳನ್ನು ಸಮಿತಿಗೆ ಸಲ್ಲಿಸಲು ಸಹ ಸೂಚಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಮುಂದಿನ ಸಭೆಯ ದಿನಾಂಕದೊಳಗೆ ಸಮಿತಿಯ ಕಛೇರಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಈ ನಿಟ್ಟಿನಲ್ಲಿ ಸಮಿತಿಯು ಮುಂಬರುವ ದಿನಗಳಲ್ಲಿ ತಪಾಸಣೆಯನ್ನು ಹಮ್ಮಿಕೊಳ್ಳುವುದಾಗಿ, ತಪಾಸಣಾ ಸಂದರ್ಭದಲ್ಲಿ ಯಾವುದೇ ನ್ಯೂನತೆಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸೂಚಿಸುತ್ತಾ ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಿದರು. .

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಅಪರ ಆಯುಕ್ತರು (ಆಡಳಿತ) ರವರಿಗೆ ಮಾಹಿತಿಗಾಗಿ
6.ಜಂಟಿ ಆಯುಕ್ತರರು (ಆರ್.ಆರ್.ನಗರ) ರವರಿಗೆ ಅಗತ್ಯ ಕ್ರಮಕ್ಕಾಗಿ
7.ಮುಖ್ಯ ಅಭಿಯಂತರರು (ಆರ್.ಆರ್.ನಗರ) ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
8.ಮುಖ್ಯ ಲೆಕ್ಕಾಧಿಕಾರಿ ಯವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
9.ಕಛೇರಿ ಕಡತಕ್ಕೆ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ: 30-11-2016 ರಂದು ಬೆಳಿಗ್ಗೆ 11.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಮುಖ್ಯ ಲೆಕ್ಕಾಧಿಕಾರಿಗಳು |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | ಕೌನ್ಸಿಲ್ ಕಾರ್ಯದರ್ಶಿಗಳು |
| 3. | ಎನ್.ಉಮಾ | – ಸದಸ್ಯರು | ಸ.ನಿ (ಆಡಿಟ್ ಸೆಲ್) |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | ಎ.ಸಿ. (ಆಡಿಟ್ ಸೆಲ್) |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | ಎ.ಓ (ಆಡಿಟ್ ಸೆಲ್) |
| 6. | ವಿ.ಸುರೇಶ್ | – ಸದಸ್ಯರು | ಜಂಟಿ ಆಯುಕ್ತರು (ದಾಸರಹಳ್ಳಿ) |
| 7. | ಹೆಚ್.ಕುಸುಮಾ | – ಸದಸ್ಯರು | ಉಪ ನಿಯಂತ್ರಕರು (ಹಣಕಾಸು) |
| 8. | ಎಂ.ಮಾಲತಿ | – ಸದಸ್ಯರು | ಸಂಬಂಧಪಟ್ಟ ಎಲ್ಲಾ |
| 9. | ಎಂ.ಶಾಮಲ | – ಸದಸ್ಯರು | ಸಹ ಕಂದಾಯ ಅಧಿಕಾರಿಗಳು |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | ತೋ.ಅಧೀಕ್ಷಕರು (ದಾಸರಹಳ್ಳಿ) |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | ಸ.ನಿ.(ಹಣಕಾಸು-ದಾಸರಹಳ್ಳಿ) |
| | | | ಕಾ.ಪಾ.ಅ.(ದಾಸರಹಳ್ಳಿ ವಿಭಾಗ) |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲು ಮಾಡಿಕೊಳ್ಳಲಾಯಿತು)

ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಹಾಜರಿದ್ದ ಸಮಿತಿಯ ಸದಸ್ಯರುಗಳಿಗೆ ಮತ್ತು ಅಧಿಕಾರಿಗಳಿಗೆ ಸ್ವಾಗತ ಕೋರಿ, ತಮ್ಮ ಪರಿಚಯವನ್ನು ಮಾಡಿಕೊಂಡು ನಂತರ ಸಮಿತಿಯ ಸದಸ್ಯರುಗಳು ಮತ್ತು ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಳ್ಳುವಂತೆ ಕೋರಿದರು. ಅದರಂತೆ, ಹಾಜರಿದ್ದ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ಅಧಿಕಾರಿಗಳು ಸಭೆಗೆ ತಮ್ಮ ಪರಿಚಯ ಮಾಡಿಕೊಂಡರು.

ಅಧ್ಯಕ್ಷರು ಮಾತನಾಡುತ್ತಾ ದಾಸರಹಳ್ಳಿ ವಲಯಕ್ಕೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ ಇದುವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಚರ್ಚಿಸುವ ಸಲುವಾಗಿ ಸಭೆಯನ್ನು ನಿಗಧಿಪಡಿಸಿದ್ದು, ಬೆಂಗಳೂರು ಮಹಾನಗರ ಪಾಲಿಕೆಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಾಗಿ ವಿಸ್ತಾರಗೊಂಡ ನಂತರದ ಅಂದರೆ 2006-07ನೇ ಸಾಲಿನಿಂದ ತಹಲ್‌ವರೆಗಿನ ಲೆಕ್ಕಪರಿಶೋಧನಾ ವರದಿಯನ್ನು ಪರಿಶೀಲಿಸಲು

ಸಮಿತಿಯು ತೀರ್ಮಾನಿಸಿದ್ದು, ಸದರಿ ಸಾಲುಗಳಿಗೆ ಸಂಬಂಧಿಸಿದ ವಿವರವಾದ ವರದಿಯ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಹಾಜರಿದ್ದ ಅಧಿಕಾರಿ/ಸಿಬ್ಬಂದಿಗಳಿಗೆ ಸೂಚಿಸಿದರು.

ನಂತರ ಮುಖ್ಯ ಲೆಕ್ಕಾಧಿಕಾರಿಯವರು ಮಾತನಾಡುತ್ತಾ, ಪಾಲಿಕೆಯ ವ್ಯಾಪ್ತಿಯ ವಿವಿಧ ಕಛೇರಿಗಳಲ್ಲಿನ ವಾರ್ಷಿಕ ಲೆಕ್ಕ ಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಸಂಬಂಧಿಸಿದ ಅಂಕಿಅಂಶಗಳ ಮಾಹಿತಿಯನ್ನು ಸಭೆಗೆ ನೀಡುತ್ತಾ, ದಾಸರಹಳ್ಳಿ ವಲಯಕ್ಕೆ ಸಂಬಂಧಿಸಿದಂತೆ ಬಾಕಿ ಇರುವ ಒಟ್ಟು ಕಂಡಿಕೆಗಳು, ಆಕ್ಷೇಪಣೆ ಮೊತ್ತ ಮತ್ತು ವಸೂಲಾತಿಗೆ ಬಾಕಿ ಇರುವ ಅಂಕಿಅಂಶಗಳ ಮಾಹಿತಿಯನ್ನು ಸಭೆಗೆ ನೀಡಿ, 2008-09ನೇ ಸಾಲಿನವರೆಗೆ ಲೆಕ್ಕ ಪರಿಶೋಧನೆಯ ಆಕ್ಷೇಪಣೆಗಳಿಗೆ ಸಂಬಂಧಿಸಿದಂತೆ ಉತ್ತಮ ಪ್ರತಿಕ್ರಿಯೆ ಇದ್ದು, ತದನಂತರ ಹೆಚ್ಚಿನ ಬೆಳವಣಿಗೆಗಳು ಇಲ್ಲದೆ ಇರುವುದು ಕಂಡುಬಂದಿದ್ದು, ಇದಕ್ಕೆ ಕಾರ್ಯಯೋಜನೆ ಇಲ್ಲದೆ ಇರುವುದೇ ಮುಖ್ಯ ಕಾರಣ ಎಂದು ತಿಳಿಸುತ್ತಾ, ಪ್ರತಿದಿನ ಲೆಕ್ಕ ಪತ್ರ ನಿರ್ವಹಣೆಗೆ ಸಂಬಂಧಿಸಿದಂತೆ ಕನಿಷ್ಠ ಒಂದು ಗಂಟೆಗಳ ಕಾಲ ಕಛೇರಿಯಲ್ಲಿ ಸಮಯವನ್ನು ನಿಗಧಿಪಡಿಸಿಕೊಂಡು ಕೆಲಸವನ್ನು ನಿರ್ವಹಿಸಿದ ಪಕ್ಷದಲ್ಲಿ ಬಾಕಿ ಇರುವ ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತಗಳ ತೀರುವಳಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬಹುದೆಂದು, ಪಾಲಿಕೆಯ ಆರ್ಥಿಕ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಈ ನಿಟ್ಟಿನಲ್ಲಿ ಕಟ್ಟುನಿಟ್ಟಾಗಿ ಕರ್ತವ್ಯ ನಿರ್ವಹಿಸಬೇಕೆಂದು ತಿಳಿಸಿದರು.

ನಂತರ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಜಂಟಿ ಆಯುಕ್ತರು ರವರಿಗೆ ಕೆ.ಎಂ.ಸಿ ಕಾಯ್ದೆ ಕಲಂ 440. 150ನೇ ಪ್ರಕರಣ ಮತ್ತು IX ನೇ ಅನುಸೂಚಿಯ ಮೇರೆಗಿನ ಕಡ್ಡಾಯ ಕೋರಿಕೆಯ ಉಲ್ಲಂಘನೆಗಾಗಿ ಎಷ್ಟು ಪ್ರಕರಣಗಳಿಗೆ ಜುಲ್ಮಾನೆಯನ್ನು ವಿಧಿಸಲಾಗಿರುತ್ತದೆ ಎಂಬುದರ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ದಾಸರಹಳ್ಳಿ ವಲಯ ವ್ಯಾಪ್ತಿಯಲ್ಲಿ ಸದರಿ ನಿಯಮದ ಅಡಿಯಲ್ಲಿ ಯಾವುದೇ ದಂಡವನ್ನು ವಿಧಿಸಿರುವುದಿಲ್ಲವೆಂದು, ಮುಂದಿನ ದಿನಗಳಲ್ಲಿ ಇಂತಹ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ ಅಗತ್ಯ ಕ್ರಮವನ್ನು ವಹಿಸಲಾಗುವುದೆಂದು ಹಾಜರಿದ್ದ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು

ಮುಂದುವರಿದು ಅಧ್ಯಕ್ಷರು ಜಂಟಿ ಆಯುಕ್ತರು ರವರಿಗೆ ದಾಸರಹಳ್ಳಿ ವಲಯಕ್ಕೆ ಸಂಬಂಧಿಸಿದಂತೆ ಬಾಕಿ ಇರುವ ಕಂಡಿಕೆಗಳಿಗೆ, ಆಕ್ಷೇಪಣೆಗಳಿಗೆ ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು ನೀಡಲು ಹಾಗೂ ಲೆಕ್ಕ ಪರಿಶೋಧನಾ ವರದಿಗಳ ಆಕ್ಷೇಪಣೆ

ಹಾಗೂ ವಸೂಲಾತಿಗೆ ಸಂಬಂಧಿಸಿದಂತೆ ಅಧೀನ ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸಿರುವ ಬಗ್ಗೆ ಮಾಹಿತಿಗಳನ್ನು ಸಲ್ಲಿಸಲು ಸೂಚಿಸಿದಾಗ, ಜಂಟಿ ಆಯುಕ್ತರು ಈ ಹಿಂದೆ ಈ ಕುರಿತು ಯಾವುದೇ ಸಭೆಗಳನ್ನು ನಡೆಸಿರುವುದಿಲ್ಲವೆಂದು ಮಾಹಿತಿ ನೀಡಿದಾಗ, ಅಧ್ಯಕ್ಷರು ಇನ್ನು ಮುಂದೆ ವಲಯ ಮಟ್ಟದಲ್ಲಿ ಪ್ರತಿ ತಿಂಗಳಿಗೊಮ್ಮೆ ಲೆಕ್ಕಪತ್ರ ನಿರ್ವಹಣೆ ಕುರಿತಂತೆ ವಲಯ ವ್ಯಾಪ್ತಿಯ ಅಧಿಕಾರಿಗಳೊಂದಿಗೆ ಸಭೆಯನ್ನು ನಿಗಧಿಪಡಿಸಿ, ಚರ್ಚಿಸಿ ಸಭೆಯ ನಡವಳಿಗಳನ್ನು ಸಮಿತಿಗೆ ಸಲ್ಲಿಸಲು ಹಾಗೂ ಮುಂದಿನ ದಿನಗಳಲ್ಲಿ ಸಮಿತಿಯು ನಡೆಸುವ ಸಭೆಗೆ ಎಲ್ಲಾ ವಿವರಗಳೊಂದಿಗೆ ಹಾಜರಾಗಬೇಕೆಂದು ಸೂಚಿಸಿದರು.

ನಂತರ ಆರೋಗ್ಯಾಧಿಕಾರಿ (ದಾಸರಹಳ್ಳಿ) ವಲಯಕ್ಕೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಆರೋಗ್ಯ ಇಲಾಖೆಯ ಅಧಿಕಾರಿಯು ಸಮಿತಿಯು ಕೇಳಿದ ಪ್ರಶ್ನೆಗೆ ಯಾವುದೇ ಸಮರ್ಪಕವಾದ ಉತ್ತರವನ್ನು ನೀಡುವಲ್ಲಿ ವಿಫಲರಾಗಿರುತ್ತಾರೆ. ಸದರಿಯವರಿಗೆ ಇನ್ನು ಮುಂದೆ ಈ ಬಗ್ಗೆ ಬೇಜವಾಬ್ದಾರಿತನ ತೋರದೆ ಅಗತ್ಯ ಕ್ರಮ ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದರು.

ಮುಂದುವರಿದಂತೆ, ಸಭೆಯಲ್ಲಿ ಹಾಜರಿದ್ದ ದಾಸರಹಳ್ಳಿ ವಲಯದ ಎಲ್ಲಾ ಸಹಾಯಕ ಕಂದಾಯ ಅಧಿಕಾರಿಗಳು ಅವರವರ ಕಛೇರಿಗಳಿಗೆ ಸಂಬಂಧಿಸಿದಂತೆ, ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ ಮತ್ತು ವಸೂಲಾತಿ ಮೊತ್ತದ ವಿವರಗಳ ಮಾಹಿತಿಯನ್ನು ಸಭೆಗೆ ನೀಡಿ, ಉಳಿದಂತೆ ಸಮಿತಿಯು ಕೋರಿರುವ ಎಲ್ಲಾ ವಿವರಗಳನ್ನು ಸಲ್ಲಿಸುವುದಾಗಿ ತಿಳಿಸುತ್ತಾ, ಈಗಾಗಲೇ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಲು ಅಗತ್ಯ ಕ್ರಮಗಳನ್ನು ಕೈಗೊಂಡಿರುವುದಾಗಿ ಸಭೆಗೆ ಮಾಹಿತಿ ನೀಡಿದ ಮೇರೆಗೆ, ಮುಂದಿನ ಸಭೆಗೆ ಎಲ್ಲಾ ವಿವರಗಳೊಂದಿಗೆ ಹಾಜರಾಗಲು ಸೂಚಿಸಲಾಯಿತು ಹಾಗೂ ಪಾಲಿಕೆಯ ಮೂಲ ಆದಾಯವಾಗಿರುವ ತೆರಿಗೆಯನ್ನು ಸಮರ್ಪಕವಾಗಿ ವಸೂಲು ಮಾಡಬೇಕೆಂದು, ಅಲ್ಲದೆ ನಿವೇಶನಗಳಿಗೆ ಕಂದಾಯವನ್ನು ನಿಗಧಿಪಡಿಸುವಾಗ ಅಳತೆಗಳಲ್ಲಿ ವ್ಯತ್ಯಾಸಗಳನ್ನು ಮಾಡುತ್ತಿರುವುದಾಗಿ ದೂರಗಳು ಬರುತ್ತಿದ್ದು, ಈ ಬಗ್ಗೆ ಮರು ಪರಿಶೀಲನೆ ಮಾಡಿ ಕಂದಾಯವನ್ನು ನಿಗಧಿಪಡಿಸಬೇಕೆಂದು ಸಹ ಅಧ್ಯಕ್ಷರು ಸೂಚಿಸಿದರು.

ನಂತರ ಸಭೆಯಲ್ಲಿ ಹಾಜರಿದ್ದ ತೋಟಗಾರಿಕಾ ಅಧೀಕ್ಷಕರು (ದಾಸರಹಳ್ಳಿ) ರವರಿಗೆ ಅವರ ಕಛೇರಿಗೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಸದರಿಯವರು ಯಾವುದೇ ಸಮರ್ಪಕ ಮಾಹಿತಿಯನ್ನು ಸಭೆಗೆ ನೀಡುವಲ್ಲಿ ವಿಫಲರಾಗಿರುತ್ತಾರೆ. ಆಗ ಸದಸ್ಯರಾದ ಶ್ರೀಯುತ ಗೌತಮ್ ಕುಮಾರ್ ರವರು ದಾಸರಹಳ್ಳಿ ವಲಯ ವ್ಯಾಪ್ತಿಯಲ್ಲಿ ತೋಟಗಾರಿಕಾ ಅಧೀಕ್ಷಕರವರ ಕಛೇರಿಯಿಂದ ನಿರ್ವಹಣೆ ಮಾಡುತ್ತಿರುವ ಉದ್ಯಾನವನಗಳ

ವಿವರ, ಅವುಗಳ ನಿರ್ವಹಣೆಗೆ ಸಂಬಂಧಪಟ್ಟ ಸಂಪೂರ್ಣ ಕಡತಗಳನ್ನು ಸಮಿತಿಗೆ ಪರಿಶೀಲನೆಗೆ ತರಲು ಸೂಚಿಸಿದರು.

ಮುಂದುವರಿದು ಸಮಿತಿಯ ಸದಸ್ಯರಾದ ಶ್ರೀಯುತ ಗೌತಮ್ ರವರು ಮಾತನಾಡುತ್ತಾ, ಸಮಿತಿಯು ಪಾಲಿಕೆಯ ವ್ಯಾಪ್ತಿಯಲ್ಲಿ ಲೆಕ್ಕ ಪರಿಶೋಧನಾ ವರದಿಯಲ್ಲಿನ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿಯನ್ನು ಸಲ್ಲಿಸದೇ ಇರುವುದನ್ನು ಗಂಭೀರವಾಗಿ ಪರಿಗಣಿಸಿದ್ದು, ಇದು ಪಾಲಿಕೆಯ ಆರ್ಥಿಕ ಬೆಳವಣಿಗೆಯ ಮೇಲೂ ಪರಿಣಾಮ ಬೀರುತ್ತಿದ್ದು, ಈ ನಿಟ್ಟಿನಲ್ಲಿ ಪ್ರಸಕ್ತ ಅವಧಿಯಲ್ಲಿ ಸಮಿತಿಯು ಲೆಕ್ಕಪತ್ರ ನಿರ್ವಹಣೆಯಲ್ಲಿ ಕೆಲವೊಂದು ಬದಲಾವಣೆಯನ್ನು ತರುವ ಉದ್ದೇಶ ಹೊಂದಿದ್ದು, ಅದಕ್ಕೆ ಪೂರಕವಾಗಿ ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ಕಛೇರಿಯ ಅಧಿಕಾರಿಗಳು ಕರ್ತವ್ಯವನ್ನು ನಿರ್ವಹಿಬೇಕೆಂದು ಸೂಚಿಸಿದರು. ಅಲ್ಲದೆ ಸಮಿತಿಯು ಮುಂಬರುವ ದಿನಗಳಲ್ಲಿ ಅನಿರೀಕ್ಷಿತ ತಪಾಸಣೆಗೆ ಬರುವುದಾಗಿ ತಿಳಿಸುತ್ತಾ, ತಪಾಸಣಾ ಸಮಯದಲ್ಲಿ ಲೆಕ್ಕಪತ್ರ ನಿರ್ವಹಣೆಯಲ್ಲಿ ಲೋಪದೋಷಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ದ ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಮುಂದುವರಿದು ಹಾಜರಿದ್ದ ವಲಯ ಸಹಾಯಕ ನಿಯಂತ್ರಕರು (ಹಣಕಾಸು–ದಾಸರಹಳ್ಳಿ) ರವರಿಗೆ ಅವರ ಕಛೇರಿಯ ಕಾರ್ಯವ್ಯಾಪ್ತಿಯ ಬಗ್ಗೆ ಹಾಗೂ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ವಲಯ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕ್ರಮಗಳ ಮಾಹಿತಿಯನ್ನು ಸಭೆಗೆ ನೀಡಲು ಸೂಚಿಸಲಾಗಿ, ಸದರಿಯವರು ಸಮಿತಿಯು ಕೇಳಿದ ಯಾವುದೇ ಮಾಹಿತಿಯನ್ನು ಸಮರ್ಪಕವಾಗಿ ನೀಡುವಲ್ಲಿ ವಿಫಲರಾಗಿರುತ್ತಾರೆ. ಈ ನಿಟ್ಟಿನಲ್ಲಿ ಇನ್ನು ಮುಂದೆ ಸಕ್ರಿಯವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದಾಗ, ಸದಸ್ಯರಾದ ಶ್ರೀ ಗೌತಮ್ ಕುಮಾರ್ ರವರು ವಲಯ ವ್ಯಾಪ್ತಿಯ ಅಧೀನ ಕಛೇರಿಗಳಿಂದ ಸಲ್ಲಿಸುವ ವಿವಿಧ ವೆಚ್ಚಗಳಿಗೆ ಸಂಬಂಧಿಸಿದ ಬಿಲ್‌ಗಳನ್ನು ಪಾವತಿಸುವ ಮುಂಚಿತವಾಗಿ ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ, ವಸೂಲಾತಿ ಮತ್ತು ತೀರುವಳಿಗೆ ಸಂಬಂಧಿಸಿದಂತೆ ಅನುಸರಣಾ ವರದಿ ಸಲ್ಲಿಸಿರುವ ಬಗ್ಗೆ ಖಾತರಿ ಪಡಿಸಿಕೊಂಡು ಬಿಲ್‌ಗಳನ್ನು ಪಾವತಿಸುವಂತೆ ಅಲ್ಲದೆ ಪ್ರತಿ 15 ದಿನಗಳಿಗೊಮ್ಮೆ ಸಹಾಯಕ ನಿಯಂತ್ರಕರು (ಹಣಕಾಸು) ಕಛೇರಿಯಲ್ಲಿ ಆಡಿಟ್ ವಿಷಯದ ಸಂಬಂಧ ಸಭೆಯನ್ನು ನಡೆಸಿ, ಸೂಕ್ತ ಕ್ರಮವನ್ನು ಕೈಗೊಂಡು, ನಡವಳಿಗಳೊಂದಿಗೆ ಸಮಿತಿಗೆ ವರದಿಯನ್ನು ಸಲ್ಲಿಸುವಂತೆ ಸೂಚಿಸಿದರು.

ನಂತರ ಕಾಮಗಾರಿ ವಿಭಾಗಕ್ಕೆ ಸಂಬಂಧಪಟ್ಟಂತೆ ಲೆಕ್ಕ ಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಭೆಗೆ ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಕಾರ್ಯಪಾಲಕ ಅಭಿಯಂತರರು

(ದಾಸರಹಳ್ಳಿ) ರವರು ಸಭೆಗೆ ಯಾವುದೇ ಮಾಹಿತಿಯನ್ನು ತರದೇ, ಸಮಿತಿಯು ಕೇಳಿದ ಪ್ರಶ್ನೆಗಳಿಗೆ ಸಮರ್ಪಕವಾದ ಉತ್ತರವನ್ನು ನೀಡುವಲ್ಲಿ ವಿಫಲರಾಗಿರುತ್ತಾರೆ. ಅಲ್ಲದೆ ಕಛೇರಿಯ ಲೆಕ್ಕ ಅಧೀಕ್ಷಕರವರ ಬಳಿ ಸಂಪೂರ್ಣ ಮಾಹಿತಿ ಇರುವುದಾಗಿ ತಿಳಿಸಿದಾಗ, ನಂತರ ಕಛೇರಿ ಲೆಕ್ಕ ಅಧೀಕ್ಷಕರವರನ್ನು ಸಭೆಗೆ ಮಾಹಿತಿ ಒದಗಿಸುವಂತೆ ಸೂಚಿಸಲಾಗಿ, ಸದರಿಯವರು ಸಹ ಸಭೆಯು ಕೇಳಿದ ಯಾವುದೇ ಮಾಹಿತಿಗಳನ್ನು ಒದಗಿಸುವಲ್ಲಿ ಸಂಪೂರ್ಣವಾಗಿ ವಿಫಲರಾಗಿರುತ್ತಾರೆ. ಆಗ ಶ್ರೀ ಗೌತಮ್ ಕುಮಾರ್, ಸದಸ್ಯರು ರವರು ಈ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ ಅಧಿಕಾರಿ/ಸಿಬ್ಬಂದಿಗಳು ತಮಗೆ ನಿಯೋಜಿಸಿರುವ ಕರ್ತವ್ಯಗಳನ್ನು ಯಾವುದೇ ಲೋಪವಿಲ್ಲದಂತೆ ನಿರ್ವಹಿಸಬೇಕೆಂದು ಸೂಚಿಸುತ್ತಾ, ದಾಸರಹಳ್ಳಿ ವಲಯ ಕಾಮಗಾರಿ ವಿಭಾಗಕ್ಕೆ ಸಂಬಂಧಿಸಿದಂತೆ ಲೆಕ್ಕಪರಿಶೋಧನಾ ವರದಿಯ ಸಂಪೂರ್ಣ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಎಲ್ಲಾ ಮಾಹಿತಿಗಳನ್ನು ಮುಂದಿನ ಸಭೆಯ ದಿನಾಂಕದೊಳಗೆ ಸಮಿತಿಯ ಕಛೇರಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆ ಹಾಗೂ ಲೆಕ್ಕ ಪರಿಶೋಧನಾ ವರದಿಗಳಿಗೆ ಸಂಬಂಧಿಸಿದಂತೆ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಈ ನಿಟ್ಟಿನಲ್ಲಿ ಸಮಿತಿಯು ಮುಂಬರುವ ದಿನಗಳಲ್ಲಿ ಅನಿರೀಕ್ಷಿತ ತಪಾಸಣೆಯನ್ನು ಹಮ್ಮಿಕೊಳ್ಳುವುದಾಗಿ ತಿಳಿಸುತ್ತಾ, ಸಭೆಯನ್ನು ವಂದನೆಯೊಂದಿಗೆ ಮುಕ್ತಾಯಗೊಳಿಸಿದರು

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಜಂಟಿ ಆಯುಕ್ತರು (ದಾಸರಹಳ್ಳಿ) ರವರಿಗೆ ಕಳುಹಿಸುತ್ತಾ, ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ.
6.ಮುಖ್ಯ ಲೆಕ್ಕಾಧಿಕಾರಿಯವರ ಮಾಹಿತಿಗಾಗಿ
7.ಕಛೇರಿ ಕಡತಕ್ಕೆ